# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 802(974) |
| ಮಾನ್ಯ ಸದಸ್ಯರ ಹೆಸರು | : ಶ್ರೀ ಮಂಜುನಾಥ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : 15.12.2025 |
| ಉತ್ತರಿಸಬೇಕಾದ ಸಚಿವರು | : ಉನ್ನತ ಶಿಕ್ಷಣ ಸಚಿವರು |

| ಕ್ರಸ | ಪ್ರಶ್ನೆಗಳು | ಉತ್ತರ |
|---|---|---|
| ಅ | ರಾಜ್ಯದಲ್ಲಿ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಮತ್ತು ಉನ್ನತ ಶಿಕ್ಷಣ ವಿವಿಧ ಕೋರ್ಸುಗಳಲ್ಲಿ ಲಭ್ಯವಿರುವ ಒಟ್ಟು ಸೀಟುಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ವಾರ್ಷಿಕವಾಗಿ ಭರ್ತಿಯಾಗುವ ಸೀಟುಗಳ ಸಂಖ್ಯೆ ಎಷ್ಟು; ಖಾಲಿ ಉಳಿಯುವ ಸೀಟುಗಳ ಸಂಖ್ಯೆ ಎಷ್ಟು; ಕಳೆದ 3 ವರ್ಷಗಳ ಅಂಕಿ ಅಂಶಗಳನ್ನು ಒದಗಿಸುವುದು. | ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪದವಿ ಹಾಗೂ ಸ್ನಾತಕೋತ್ತರ ಕೋರ್ಸುಗಳಿಗೆ ಸರ್ಕಾರ ಮತ್ತು ವಿಶ್ವವಿದ್ಯಾಲಯಗಳಿಂದ ನಿಗದಿಪಡಿಸಿರುವ ಪ್ರವೇಶಾತಿಮಿತಿ (Admission Intake) ಹಾಗೂ ಕಳೆದ ಎರಡು ಶೈಕ್ಷಣಿಕ ವರ್ಷಗಳ ಪ್ರವೇಶಾತಿ ವಿವರಗಳನ್ನು ಅನುಬಂಧ-1ರಲ್ಲಿ ಒದಗಿಸಿದೆ.<br><br>ರಾಜ್ಯದಲ್ಲಿರುವ ಬಿ.ಇಡಿ ಕಾಲೇಜುಗಳಲ್ಲಿ ಕಳೆದ 03 ವರ್ಷಗಳಲ್ಲಿ ಸರ್ಕಾರಿ ಕೋಟಾದಡಿ ಲಭ್ಯವಿರುವ, ಭರ್ತಿಯಾಗಿರುವ ಹಾಗೂ ಖಾಲಿಯಿರುವ (ಉಳಿಕೆಯಾದ) ಸೀಟುಗಳ ವಿವರವನ್ನು ಅನುಬಂಧ-2ರಲ್ಲಿ ಒದಗಿಸಿದೆ.<br><br>ಉನ್ನತ ಶಿಕ್ಷಣದ ವಿವಿಧ ಕೋರ್ಸುಗಳಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಒಟ್ಟು ಲಭ್ಯವಿರುವ ಸೀಟುಗಳ ವಿವರ ಮತ್ತು ಇಂಜಿನಿಯರಿಂಗ್ ಸೀಟುಗಳ ಪಟ್ಟಿಯನ್ನು ಅನುಬಂಧ-3ರಲ್ಲಿ ಒದಗಿಸಿದೆ. |
| ಆ | ಖಾಲಿ ಇರುವ ಸೀಟುಗಳಲ್ಲಿ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ ಮತ್ತು ಇತರ ಹಿಂದುಳಿದ ವರ್ಗಗಳು ಹಾಗೂ ಸಾಮಾನ್ಯ ವರ್ಗಗಳ ಸೀಟುಗಳ ಸಂಖ್ಯೆ ಎಷ್ಟು; ಸಾಮಾನ್ಯ ವರ್ಗಗಳ ಸೀಟುಗಳನ್ನು ಹೊರತುಪಡಿಸಿ ಉಳಿದ ಸೀಟುಗಳು ಖಾಲಿ ಉಳಿಯಲು ಕಾರಣವೇನು; | ಸರ್ಕಾರದ ಆದೇಶ ಸಂಖ್ಯೆ: ಇಡಿ 102 ಯುಎನ್ಇ 2009, ದಿನಾಂಕ: 04.06.2009ರನ್ವಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಪ್ರವೇಶಾತಿ ಬಯಸುವ ಯಾವುದೇ ವಿದ್ಯಾರ್ಥಿಗೆ ಪ್ರವೇಶಾತಿಯನ್ನು ನಿರಾಕರಿಸುವಂತಿಲ್ಲ.<br><br>ಈ ಹಿನ್ನೆಲೆಯಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಸೀಟುಗಳು ಖಾಲಿ ಉಳಿಯುವುದಕ್ಕೆ ಕೆನೆಪದರ ಮಿತಿಯು ಕಾರಣವಾಗಿರುವುದಿಲ್ಲ.<br><br>ಬಿ.ಇಡಿ ಕೋರ್ಸುಗಳಿಗೆ ದಾಖಲಾತಿ ಬಯಸಿ ಅರ್ಜಿ ಸಲ್ಲಿಸುವ ಬಹುತೇಕ ವಿದ್ಯಾರ್ಥಿಗಳು ಗ್ರಾಮೀಣ ಪ್ರದೇಶಕ್ಕೆ ಹಾಗೂ ಕಲ್ಯಾಣ ಕರ್ನಾಟಕ ವ್ಯಾಪ್ತಿಗೆ ಸೇರಿದವರಾಗಿರುತ್ತಾರೆ. ಬಿ.ಇಡಿ ಕೋರ್ಸಿಗೆ ಲಭ್ಯವಿರುವ ಹೆಚ್ಚಿನ ಸಂಖ್ಯೆಯ ಸೀಟುಗಳು ಬೆಂಗಳೂರು ನಗರದ ಬಿ.ಇಡಿ ಕಾಲೇಜುಗಳಲ್ಲಿ ಇರುವುದರಿಂದ ಹಾಗೂ ಬಹುತೇಕ ವಿದ್ಯಾರ್ಥಿಗಳು ಗ್ರಾಮೀಣ ಭಾಗದವರಾಗಿದ್ದು, ಅವರ ಸ್ವಂತ ವಾಸ |
| ಇ | ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು | |

| | | |
|---|---|---|
| | ಇತರ ಹಿಂದುಳಿದ ವರ್ಗಗಳ ಸೀಟುಗಳು ಖಾಲಿ ಉಳಿಯಲು ಅವರಿಗೆ ಕೆನೆಪದರ ಮಾನದಂಡಗಳನ್ನು ಪರಿಷ್ಟರಿಸದಿರುವುದೇ ಕಾರಣವಾಗಿದೆಯೇ | ಸ್ಥಳಕ್ಕೆ ಹತ್ತಿರವಿರುವ ಬಿ.ಇಡಿ ಕಾಲೇಜುಗಳಲ್ಲಿ ದಾಖಲಾತಿ ಪಡೆಯಲು ಬಯಸುತ್ತಿರುವುದರಿಂದ ಗ್ರಾಮೀಣ ಭಾಗದ ಬಿ.ಇಡಿ ಕಾಲೇಜುಗಳಿಗೆ ಹೋಲಿಸಿದಲ್ಲಿ ಬೆಂಗಳೂರಿನ ಕಾಲೇಜುಗಳಲ್ಲಿ ಹೆಚ್ಚಿನ ಸೀಟುಗಳು ಖಾಲಿ ಉಳಿಯುತ್ತಿವೆ.<br><br>ಇಂಜಿನಿಯರಿಂಗ್ ಸೀಟುಗಳ ಹಂಚಿಕೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಅಭ್ಯರ್ಥಿಯ ಇಚ್ಛೆ ಹಾಗೂ ಆತನ ಸಿಇಟಿ ರ್‍ಯಾಂಕಿಂಗ್ ಅನ್ವಯ ಪಾರದರ್ಶಕವಾಗಿ ನಡೆಸುತ್ತದೆ.<br><br>ಹೀಗಾಗಿ, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಮತ್ತು ಇತರ ಹಿಂದುಳಿದ ವರ್ಗಗಳ ಸೀಟುಗಳು ಖಾಲಿ ಉಳಿಯಲು ಕೆನೆಪದರ ಮಿತಿಯನ್ನು ಪರಿಷ್ಕರಿಸದಿರುವುದೇ ಕಾರಣ ಎಂಬ ಬಗ್ಗೆ ಇದುವರೆಗೆ ಯಾವುದೇ ಪ್ರಕರಣಗಳು ಕಂಡುಬಂದಿರುವುದಿಲ್ಲ. |
| ಈ | ಹೌದಾದರೆ ಇತರ ಹಿಂದುಳಿದ ವರ್ಗಗಳ ಕೆನೆ ಪದರ ಮಾನದಂಡಗಳನ್ನು ಪರಿಷ್ಟರಿಸಲು ಮತ್ತು ಸಂಬಂಧಪಟ್ಟ ಇಲಾಖೆಗಳಾದ ಸಮಾಜ ಕಲ್ಯಾಣ, ಪರಿಶಿಷ್ಟ ವರ್ಗಗಳ ಇಲಾಖೆ ಮತ್ತು ಕಂದಾಯ ಇಲಾಖೆಗಳೊಂದಿಗೆ ಮತ್ತು ಕೇಂದ್ರ ಸರಕಾರದೊಂದಿಗೆ ಸದರಿ ವಿಷಯವನ್ನು ಚರ್ಚಿಸಿದೆಯೇ: ಈ ಕುರಿತಂತೆ ಸರ್ಕಾರ ಯಾವ ಕ್ರಮಕೈಗೊಂಡಿದೆ ಮತ್ತು ಯಾವಾಗ ಈ ಸಮಸ್ಯೆ ಪರಿಹಾರವಾಗುತ್ತದೆ? | ಸೀಟುಗಳು ಖಾಲಿ ಉಳಿಯಲು ಕೆನೆಪದರ ಮಿತಿ ಮತ್ತು ಮಾನದಂಡಗಳು ಕಾರಣವಾಗಿಲ್ಲದಿರುವುದರಿಂದ, ಇದೊಂದೇ ಅಂಶವನ್ನು ಪರಿಗಣಿಸಿ ಸದರಿ ಮಾನದಂಡಗಳನ್ನು ಪರಿಷ್ಕರಿಸುವ ಪ್ರಶ್ನೆ ಉದ್ಭವಿಸುವುದಿಲ್ಲ. |

ಇಡಿ 254 ವಿವಿಧ 2025

(ಡಾ. ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು